# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಶ್ರೀ. ಆರ್. ಧರ್ಮಸೇನ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 349

ಉತ್ತರಿಸಬೇಕಾದ ದಿನಾಂಕ : 14.09.2021

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ನಗರದಲ್ಲಿ ಎಷ್ಟು ಸಹಕಾರ ಬ್ಯಾಂಕುಗಳಲ್ಲಿ ಹಣದ ಅವ್ಯವಹಾರವಾಗಿ ಗ್ರಾಹಕರಿಗೆ ತೊಂದರೆ ಉಂಟಾಗಿದೆ; (ವಿವರ ನೀಡುವುದು) | ಬೆಂಗಳೂರು ನಗರದ ಶ್ರೀ ಗುರುರಾಘವೇಂದ್ರ ಸಹಕಾರ ಬ್ಯಾಂಕಿನಲ್ಲಿ ಅವ್ಯವಹಾರವಾಗಿ ಗ್ರಾಹಕರಿಗೆ ತೊಂದರೆಯುಂಟಾಗಿದೆ. ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ. |
| ಆ | ಹಣ ದುರುಪಯೋಗವಾಗಿರುವ ಸಹಕಾರಿ ಬ್ಯಾಂಕುಗಳ ಮೇಲೆ ಹಾಗೂ ಆಡಳಿತ ಮಂಡಳಿಯವರ ಮೇಲೆ ಕೈಗೊಳ್ಳಲಾದ ಕ್ರಮಗಳೇನು; | ಹಣ ದುರುಪಯೋಗವಾಗಿರುವ ಶ್ರೀ ಗುರುರಾಘವೇಂದ್ರ ಸಹಕಾರ ಬ್ಯಾಂಕಿನ ವಿರುದ್ಧ ಈ ಕೆಳಕಂಡ ಕ್ರಮ ಜರುಗಿಸಲಾಗಿದೆ.<br>1. ಬ್ಯಾಂಕಿನ ಹಗರಣಕ್ಕೆ ಸಂಬಂಧಪಟ್ಟಂತೆ ಸರ್ಕಾರವು ಸಿಐಡಿ ತನಿಖೆಗೆ ಆದೇಶಿಸಿದ್ದು, ತನಿಖೆಯ ಪ್ರಗತಿಯ ಮೇಲ್ವಿಚಾರಣೆಯನ್ನು ಗೌ॥ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಾಧೀಶರ ನೇತೃತ್ವದ ದ್ವಿಸದಸ್ಯ ಪೀಠವು ನಡೆಸುತ್ತಿದ್ದು, ಇಲ್ಲಿಯವರೆಗೆ 09 ತನಿಖಾ ಪ್ರಗತಿ ವರದಿಗಳನ್ನು ಸಲ್ಲಿಸಲಾಗಿರುತ್ತದೆ.<br>• ಈ ಪ್ರಕರಣದಲ್ಲಿ ಮೇಲ್ನೋಟಕ್ಕೆ 923 ಕೋಟಿ ರೂಪಾಯಿಗಳ ಹಣಕಾಸಿನ ಅವ್ಯವಹಾರವಾಗಿರುವುದಾಗಿ ದೂರು ಸಲ್ಲಿಸಲಾಗಿರುತ್ತದೆ. ತನಿಖಾ ಕಾಲದಲ್ಲಿ ಆರೋಪಿಗಳಾದ ಕೆ. ರಾಮಕೃಷ್ಣ, ಜಿ. ರಘುನಾಥ್ ಮತ್ತು ವಿ.ಆರ್. ರಾಜೇಶ್ ರವರುಗಳಿಂದ ನಗದು ಹಣ ರೂ. 17,88,110/-ಗಳನ್ನು ಜಪ್ತಿಪಡಿಸಲಾಗಿರುತ್ತದೆ. ಮುಂದುವರೆದು ಆರೋಪಿಗಳು ಮತ್ತು ಅವರ ಅವಲಂಬಿತ ಸದಸ್ಯರ ಹೆಸರಿನಲ್ಲಿದ್ದ ಒಟ್ಟು 9,548 ವಿವಿಧ ಬ್ಯಾಂಕ್ ಖಾತೆಗಳಲ್ಲಿದ್ದ ರೂ. 15 ಕೋಟಿಗೂ ಅಧಿಕ ಹಣವನ್ನು ಫ್ರೀಜ್ ಮಾಡಲಾಗಿರುತ್ತದೆ. ತನಿಖೆಯಲ್ಲಿ ಆರೋಪಿತರು ಹಾಗೂ ಅವರ ಸಂಬಂಧಿಕರ ಹೆಸರಿನಲ್ಲಿದ್ದ ಸುಮಾರು 1,115 ಕೋಟಿ ರೂಪಾಯಿಗಿಂತ ಹೆಚ್ಚಿನ ಬೆಲೆಬಾಳುವ ಸ್ಥಿರಾಸ್ತಿಗಳನ್ನು ಗುರುತಿಸಿ ಪ್ರಿವೆನ್ಷನ್ ಆಫ್ ಮನಿ ಲಾಂಡ್ರಿಂಗ್ ಆಕ್ಟ್ 2002 ರ ಅಡಿಯಲ್ಲಿ ಕ್ರಮ ಜರುಗಿಸಲು ಜಾರಿ ನಿರ್ದೇಶನಾಲಯಕ್ಕೆ ವರದಿಯನ್ನು ಸಲ್ಲಿಸಲಾಗಿರುತ್ತದೆ.<br>• ತನಿಖಾಧಿಕಾರಿಗಳು ತನಿಖಾ ಕಾಲದಲ್ಲಿ ಆರೋಪಿಗಳು ಮತ್ತು ಅವರ ಕುಟುಂಬದವರ ಹೆಸರಿನಲ್ಲಿದ್ದ ಸ್ಥಿರಾಸ್ತಿಗಳನ್ನು ಗುರುತಿಸಿ ಈ ಕುರಿತು ಕ್ರಮ ಜರುಗಿಸುವ ಬಗ್ಗೆ ವಿವರಗಳನ್ನು ಜಾರಿ ನಿರ್ದೇಶನಾಲಯಕ್ಕೆ ಸಲ್ಲಿಸಿದ್ದರ ಮೇರೆಗೆ ಜಾರಿ ನಿರ್ದೇಶನಾಲಯವು ದಿನಾಂಕ:17.09.2020 ರಂದು ಪಿ.ಎಂ.ಎಲ್.ಎ., ಕಾಯ್ದೆ ಅಡಿಯಲ್ಲಿ ಮುಟ್ಟುಗೋಲು ಆದೇಶ ಹೊರಡಿಸಿದ್ದು ಮುಂದಿನ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. |

| | | |
|---|---|---|
| | | • ಶ್ರೀ ಗುರು ರಾಘವೇಂದ್ರ ಸಹಕಾರ ಬ್ಯಾಂಕ್ ನಿಯಮಿತದ ಅಂಗ ಸಂಸ್ಥೆಯಾದ ಶ್ರೀ ಗುರು ಸಾರ್ವಭೌಮ ಸೌಹಾರ್ಧ ಪತ್ತಿನ ಸಹಕಾರ ನಿಯಮಿತದಲ್ಲಿನ ಅವ್ಯವಹಾರದ ಬಗ್ಗೆ ಸರ್ಕಾರವು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮ ನಿಯಮಿತ, ಬೆಂಗಳೂರು ರವರನ್ನು ಕರ್ನಾಟಕ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ ಅಧಿನಿಯಮ 2004ರ ಅಡಿಯಲ್ಲಿ ಕ್ರಮ ಜರುಗಿಸಲು ಸಕ್ಷಮ ಪ್ರಾಧಿಕಾರವನ್ನಾಗಿ ನೇಮಕಗೊಳಿಸಿರುತ್ತದೆ. ಸಕ್ಷಮ ಅಧಿಕಾರಿಗಳಿಗೆ ತನಿಖೆಯನ್ನು ಗುರುತಿಸಿರುವ ಸ್ಥಿರ ಮತ್ತು ಚರಾಸ್ತಿಗಳ ವಿವರಗಳನ್ನು ಮುಟ್ಟುಗೋಲು ಹಾಕಿಕೊಳ್ಳಲು ವರದಿಯನ್ನು ಸಲ್ಲಿಸಿದ್ದು ಮುಟ್ಟುಗೋಲು ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.<br><br>• ತನಿಖಾಧಿಕಾರಿಗಳು ಇದುವರೆವಿಗೂ ಈ ಪ್ರಕರಣದಲ್ಲಿ ಬಾಗಿಯಾಗಿರುವ ಒಟ್ಟು 37 ಜನ ಆರೋಪಿಗಳನ್ನು ದಸ್ತಗಿರಿ ಮಾಡಿರುತ್ತಾರೆ. 11 ಜನ ಆರೋಪಿಗಳು ನ್ಯಾಯಾಲಯದಿಂದ ನಿರೀಕ್ಷಣಾ ಜಾಮೀನನ್ನು ಪಡೆದುಕೊಂಡಿದ್ದು ಉಳದಂತೆ 04 ಆರೋಪಿಗಳು ಮರಣ ಹೊಂದಿರುತ್ತಾರೆ.<br><br>• ಬ್ಯಾಂಕಿನಲ್ಲಿ ಏಪ್ರಿಲ್ 2009ನೇ ಸಾಲಿನಿಂದ ಜನವರಿ 2020ರ ಸಾಲಿನವರೆಗೆ ನಡೆದಿರುವ ಹಣಕಾಸಿನ ಅವ್ಯವಹಾರದ ಬಗ್ಗೆ ಮತ್ತು ಸುಳ್ಳು ಲಾಭ ನಷ್ಟದ ತಃಖ್ತೆಯ ಕುರಿತು ಮೆ॥ ಕೆನ್ & ಕಂಪನಿ ರವರು ಫಾರೆನ್ಸಿಕ್ ಆಡಿಟ್ ನಡೆಸುತ್ತಿದ್ದು ಹಾಲಿ 2009-10ನೇ ಸಾಲಿನ ಹಣಕಾಸಿನ ಅವ್ಯವಹಾರದ ಬಗ್ಗೆ ಆಡಿಟ್ ವರದಿಯನ್ನು ಸಲ್ಲಿಸಿದ್ದರ ಮೇರೆಗೆ ದಿನಾಂಕ: 12.08.2021 ರಂದು ಮಾನ್ಯ ನ್ಯಾಯಾಲಯಕ್ಕೆ 2009-10ರ ಸಾಲಿನಲ್ಲಿ ನಡೆದಿರುವ ಹಣಕಾಸಿನ ಅವ್ಯವಹಾರಕ್ಕೆ ಸಂಬಂಧಪಟ್ಟಂತೆ ಒಟ್ಟು 28 ಜನ ಆರೋಪಿಗಳ ವಿರುದ್ಧ ಪ್ರಾಥಮಿಕ ದೋಷಾರೋಪಣಾಪಟ್ಟಿಯನ್ನು ಸಲ್ಲಿಸಿದ್ದು, ನ್ಯಾಯಾಲಯದ ವಿಚಾರಣೆಯಲ್ಲಿರುತ್ತದೆ.<br><br>• ಶ್ರೀ ಗುರು ರಾಘವೇಂದ್ರ ಸಹಕಾರ ಬ್ಯಾಂಕ್ ನಿಯಮಿತದಲ್ಲಿ ಮತ್ತು ಶ್ರೀ ಗುರು ಸಾರ್ವಭೌಮ ಸೌಹಾರ್ಧ ಪತ್ತಿನ ಸಹಕಾರ ನಿಯಮಿತದಲ್ಲಿ ನಡೆದಿರುವ ಹಣಕಾಸಿನ ಅವ್ಯವಹಾರದ ಬಗ್ಗೆ ಫಾರೆನ್ಸಿಕ್ ಆಡಿಟ್‌ನ್ನು ಲೆಕ್ಕಪರಿಶೋಧಕರು ಮಾಡುತ್ತಿದ್ದು, ಫಾರೆನ್ಸಿಕ್ ಆಡಿಟ್ ವರದಿ ಮುಗಿದ ಕೂಡಲೇ, ವಾರ್ಷಿಕವಾರು ದೋಷಾರೋಪಣಾ ಪಟ್ಟಿಗಳನ್ನು ಸಂಬಂಧಪಟ್ಟಂತಹ ನ್ಯಾಯಾಲಯಗಳಿಗೆ ಸಲ್ಲಿಸಿ ತನಿಖೆಯನ್ನು ಪೂರ್ಣಗೊಳಿಸಲಾಗುವುದು.<br><br>2. 2014-15 ರಿಂದ 2018-19 ರವರೆಗಿನ ಮರು ಲೆಕ್ಕಪರಿಶೋಧನೆಗೆ ದಿನಾಂಕ:09.07.2020 ರಂದು ಆದೇಶಿಸಲಾಗಿದೆ.<br><br>3. ದಿನಾಂಕ:27.02.2020 ರಂದು ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 ರ ಪ್ರಕರಣ 64 ರ ವಿಚಾರಣೆಗೆ ಆದೇಶಿಸಲಾಗಿದೆ. ವರದಿ ನಿರೀಕ್ಷಿಸಲಾಗಿದೆ. |

| | | |
|---|---|---|
| | | 4. ಬ್ಯಾಂಕಿನಲ್ಲಿ ಹಣ ದುರುಪಯೋಗಕ್ಕೆ ಕಾರಣರಾದ ಸಿಬ್ಬಂದಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗಿದೆ. ಪೋಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಗಿದೆ.<br><br>5. ಬ್ಯಾಂಕಿನ ಆಡಳಿತ ಮಂಡಳಿಯನ್ನು ರದ್ದುಪಡಿಸಿ ಆಡಳಿತಾಧಿಕಾರಿಯನ್ನು ನೇಮಿಸಲಾಗಿದೆ. ದಿನಾಂಕ:26.07.2021 ರಂದು ನಿಬಂಧಕರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಬ್ಯಾಂಕಿನ ಪುನಃಶ್ಚೇತನಕ್ಕೆ ಕ್ರಮ ಕೈಗೊಳ್ಳಲು ಆಡಳಿತಾಧಿಕಾರಿಯವರಿಗೆ ಸೂಚಿಸಲಾಗಿದೆ. |
| ಇ | ಮದುವೆ ಮುಂಜಿ ಮುಂತಾದ ಕಾರಣಗಳಿಗೆ ಹಣ ಡ್ರಾ ಮಾಡಲುಆಗದೆ ತೊಂದರೆಗೊಳಗಾಗಿರುವ ಗ್ರಾಹಕರ ಅನುಕೂಲಕ್ಕಾಗಿ ಯಾವ ರೀತಿಯ ಕಾರ್ಯಕ್ರಮಗಳನ್ನು ಸರ್ಕಾರ ಹಮ್ಮಿಕೊಂಡಿದೆ? | ಭಾರತೀಯ ರಿಸರ್ವ್ ಬ್ಯಾಂಕ್ ದಿನಾಂಕ: 02-01-2020 ರಂದು ಬ್ಯಾಂಕಿಂಗ್ ರೆಗ್ಯುಲೇಷನ್ ಆಕ್ಟ್ 1949 ರ ಪ್ರಕರಣ 35ರಡಿ ನಿರ್ದೇಶನ ನೀಡಿ ಪ್ರತಿ ಖಾತೆದಾರರಿಗೆ ಗರಿಷ್ಟ ರೂ.35,000 ಪಾವತಿಸಲು ಆದೇಶಿಸಿತ್ತು. ಅದನ್ನು ಪರಿಷ್ಕರಿಸಿ ದಿನಾಂಕ: 30-01-2020 ರಲ್ಲಿ ರೂ: 1.00 ಲಕ್ಷಕ್ಕೆ ಹೆಚ್ಚಿಸಿರುತ್ತದೆ.<br><br>ನಂತರ ಭಾರತೀಯ ರಿಸರ್ವ್ ಬ್ಯಾಂಕ್‌ನ ಪತ್ರ ಸಂಖ್ಯೆDoS.(UCB)(BG).No.1713/13.03.286/2019-20 ದಿನಾಂಕ:15-04-2020ರಲ್ಲಿ ವೈದ್ಯಕೀಯ ಕಾರಣಗಳಾಗಿ ರೂ.5.00 ಲಕ್ಷಗಳನ್ನು ಭಾರತೀಯ ರಿಸರ್ವ್ ಬ್ಯಾಂಕ್‌ನ ಪೂರ್ವಾನುಮತಿಯೊಂದಿಗೆ ಪಾವತಿಸಲು ಅನುಮತಿ ನೀಡಿರುತ್ತದೆ.<br><br>ಈ ಬ್ಯಾಂಕ್ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮದಡಿ ನೋಂದಣಿಗೊಂಡು ಭಾರತೀಯ ರಿಸರ್ವ್ ಬ್ಯಾಂಕ್‌ನಿಂದ ಲೈಸೆನ್ಸ್ ಪಡೆದು ಬ್ಯಾಂಕಿಂಗ್ ವ್ಯವಹಾರವನ್ನು ನಡೆಸುತ್ತಿತ್ತು. ಗ್ರಾಹಕರ ಅನುಕೂಲಕ್ಕಾಗಿ ಬ್ಯಾಂಕಿನ ಆಡಳಿತಾಧಿಕಾರಿಯವರೊಂದಿಗೆ ಕಾಲ ಕಾಲಕ್ಕೆ ಸಭೆ ನಡೆಸಿ ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ಸಲಹೆ ಸೂಚನೆ ನೀಡಲಾಗುತ್ತಿದೆ. |

**ಕಡತ ಸಂಖ್ಯೆ ಸಿಒ 77 ಸಿಆರ್‌ಸಿ 2021**

(ಎಸ್. ಟಿ. ಸೋಮಶೇಖರ್)
ಸಹಕಾರ ಸಚಿವರು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ರವರ**

**ಚುಕ್ಕೆರಹಿತ ಗುರುತಿನ ಪ್ರಶ್ನೆ ಸಂಖ್ಯೆ: 349 ಗೆ ಅನುಬಂಧ**

ಶ್ರೀ ಗುರುರಾಘವೇಂದ್ರ ಸಹಕಾರ ಬ್ಯಾಂಕ್ ನಿ.. ಬೆಂಗಳೂರು ಈ ಬ್ಯಾಂಕ್ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 ರಡಿಯಲ್ಲಿ ದಿನಾಂಕ: 12-04-1999 ರಲ್ಲಿ ನೋಂದಣಿಗೊಂಡಿದೆ. ಬ್ಯಾಂಕಿನ ಕಾರ್ಯವ್ಯಾಪ್ತಿಯು ಬೆಂಗಳೂರು, ಬೆಂಗಳೂರು ಗ್ರಾಮಾಂತರ, ತುಮಕೂರು, ರಾಮನಗರ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಸೀಮಿತವಾಗಿದೆ. ಹಾಗೂ ಬ್ಯಾಂಕಿಂಗ್ ರೆಗ್ಯೂಲೇಷನ್ ಅಧಿನಿಯಮ 1949 ರಡಿಯಲ್ಲಿ ಭಾರತೀಯ ರಿಸರ್ವ್ ಬ್ಯಾಂಕಿನಿಂದ ಬ್ಯಾಂಕಿಂಗ್ ಚಟುವಟಿಕೆ ಕೈಗೊಳ್ಳಲು ಪರವಾನಿಗೆ ಪಡೆದಿರುತ್ತದೆ.

ಭಾರತೀಯ ರಿಸರ್ವ್ ಬ್ಯಾಂಕಿನವರು ಈ ಬ್ಯಾಂಕಿನ ಶಾಸನಾತ್ಮಕ ಪರಿವೀಕ್ಷಣೆ ಕೈಗೊಂಡ ಸಂದರ್ಭದಲ್ಲಿ ಗಂಭೀರ ಸ್ವರೂಪದ ಲೋಪದೋಷಗಳು ಕಂಡು ಬಂದಿರುತ್ತವೆ. ಅವುಗಳ ಸ್ಥೂಲ ಅಂಶ ಕೆಳಕಂಡಂತಿರುತ್ತದೆ.

1. ಬ್ಯಾಂಕ್ ಕೃತ್ರಿಮ (Artificial) ಠೇವಣಾತಿ ಸೃಷ್ಟಿಸಿರುವುದು. ಠೇವಣಾತಿದಾರರು ನೈಜವಾಗಿ ಇಲ್ಲದಿದ್ದರೂ ಅನ್ಯರ ಹೆಸರಿನಲ್ಲಿ ಠೇವಣಾತಿ ಮಾಡಿರುವುದು.
2. ರೂ.154443.84 ಲಕ್ಷ ಸಾಲದ ಮೊತ್ತಕ್ಕೆ ಸಂಬಂಧಿಸಿದಂತೆ 2876 ಸಾಲದ ಖಾತೆಗಳಿಗೆ ದಾಖಲೆಗಳು ಇಲ್ಲದಿರುವುದು.
3. ಭಾರತೀಯ ರಿಸರ್ವ್ ಬ್ಯಾಂಕಿನ ನಿರ್ದೇಶನ ಉಲ್ಲಂಘನೆ ಮಾಡಿ ಬ್ಯಾಂಕಿನ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ನಿರ್ದೇಶಕರಿಗೆ ಸಾಲ ಮಂಜೂರು ಮಾಡಿರುವುದು.
4. ಸಾಲ ಮಂಜೂರಾತಿ ಪ್ರಾಧಿಕಾರ ಸಾಲವನ್ನು ಮಂಜೂರು ಮಾಡದಿದ್ದರೂ ಸಾಲದ ಹಣವನ್ನು ಬಿಡುಗಡೆ ಮಾಡಿರುವುದು.
5. 24 ಮುಖ್ಯ ಫಲಾನುಭವಿಗಳಿಗೆ (ಸಾಲಗಾರರಿಗೆ) ರೂ. 89285.26 ಲಕ್ಷ ಸಾಲ ಮಂಜೂರು ಮಾಡಿ ಹಣ ದುರುಪಯೋಗ ಮಾಡಿರುವುದು.
6. ಠೇವಣಾತಿ ಇಲ್ಲದಿದ್ದರೂ ಠೇವಣಾತಿ ಇದೆ ಎಂದು ಸಾಲ ಮಂಜೂರು ಮಾಡಿರುವುದು.
7. ಠೇವಣಾತಿದಾರರ ಒಪ್ಪಿಗೆ ಅಥವಾ ಸಹಮತಿ ಇಲ್ಲದೇ ಒಪ್ಪಿಗೆ ನೀಡದವರ ಹೆಸರಿನಲ್ಲಿ ಠೇವಣಾತಿ ಸಾಲ ನೀಡಿರುವುದು.
8. ಆದಾಯ ಗುರುತಿಸುವಿಕೆ-ಆಸ್ತಿ ವರ್ಗೀಕರಣ (Income Recognition and Asset Classification Norms) (IRAC-NORMS) ನಿಯಮಗಳನ್ನು ಪಾಲಿಸದೇ ಸ್ಪಷ್ಟವಾಗಿ ಕಾನೂನು ಉಲ್ಲಂಘನೆ ಮಾಡಿ ವಾಸ್ತವಾಂಶವನ್ನು ಮರೆಮಾಚಿರುವುದು.

ಭಾರತೀಯ ರಿಸರ್ವ್ ಬ್ಯಾಂಕ್. ಬ್ಯಾಂಕಿಂಗ್–ಚಟುವಟಿಕೆಗಳನ್ನು ಕೈಗೊಳ್ಳದಂತೆ. ದಿನಾಂಕ 02–01–2020 ರಂದು ನಿರ್ಬಂಧಿಸಿ ಆದೇಶಿಸಿರುತ್ತದೆ. ಈ ನಿರ್ಬಂಧವನ್ನು ದಿನಾಂಕ 10–01–2022 ರವರೆಗೆ ಮುಂದುವರೆಸಿರುತ್ತದೆ.

ಬ್ಯಾಂಕ್ ನೀಡಿರುವ ಸಾಲದಲ್ಲಿ ಶೇಕಡಾ 95% ರಷ್ಟು ಅನುತ್ಪಾದಕ ಆಸ್ತಿಗಳಾಗಿರುತ್ತವೆ.

ರೂ.159474.82 ಗಳಷ್ಟು ಸಾಲವನ್ನು ಮೋಸ. ವಂಚನೆ ಎಂದು ಆರ್‌ಬಿಐ ನವರು ತಮ್ಮ ಪರಿವೀಕ್ಷಣಾ ವರದಿಯಲ್ಲಿ ಪರಿಗಣಿಸಿರುತ್ತಾರೆ.

ಭಾರತೀಯ ರಿಸರ್ವ್ ಬ್ಯಾಂಕ್ ದಿನಾಂಕ:02–01–2020 ರಂದು ಬ್ಯಾಂಕಿಂಗ್ ರೆಗ್ಯುಲೇಷನ್ ಆಕ್ಟ್ 1949 ರ ಪ್ರಕರಣ 35ರಡಿ ನಿರ್ದೇಶನ ನೀಡಿ ಪ್ರತಿ ಖಾತೆದಾರರಿಗೆ ಗರಿಷ್ಟ ರೂ.35.000 ಪಾವತಿಸಲು ಆದೇಶಿಸಿತ್ತು. ಅದನ್ನು ಪರಿಷ್ಕರಿಸಿ ದಿನಾಂಕ: 30–01–2020ರಲ್ಲಿ ರೂ: 1.00 ಲಕ್ಷಕ್ಕೆ ಹೆಚ್ಚಿಸಿರುತ್ತದೆ.

ದಿನಾಂಕ: 15–04–2020ರ ಆದೇಶದಲ್ಲಿ ಗಂಭೀರ ಸ್ವರೂಪದ ಆರೋಗ್ಯ ಸಮಸ್ಯೆ ಇದ್ದಲ್ಲಿ ಭಾರತೀಯ ರಿಸರ್ವ್ ಬ್ಯಾಂಕ್‌ನ ಪೂರ್ವಾನುಮತಿಯೊಂದಿಗೆ ಐದು ಲಕ್ಷಗಳಿಗೆ ಹೆಚ್ಚಿಸಿರುತ್ತದೆ. ಇದರನ್ವಯ ದಿನಾಂಕ 31–08–2021 ರವರೆವಿಗೆ 780 ಗ್ರಾಹಕರಿಗೆ ರೂ.13.22 ಕೋಟಿಗಳನ್ನು ಪಾವತಿಸಲಾಗಿದೆ.

ಭಾರತೀಯ ರಿಸರ್ವ್ ಬ್ಯಾಂಕಿನ ಸಲಹೆ ಮೇರೆಗೆ ದಿನಾಂಕ 18–05–2020 ರಲ್ಲಿ ಬ್ಯಾಂಕಿನ ಆಡಳಿತ ಮಂಡಳಿಯನ್ನು ರದ್ದುಪಡಿಸಿ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 ಪ್ರಕರಣ 30(6)ರಡಿಯಲ್ಲಿ ಆಡಳಿತಾಧಿಕಾರಿಯನ್ನಾಗಿ ಇಲಾಖಾಧಿಕಾರಿಯನ್ನು ಒಂದು ವರ್ಷದ ಅವಧಿಗೆ ನೇಮಿಸಲಾಗಿತ್ತು. ಸದರಿ ಆಡಳಿತಾಧಿಕಾರಿ ಪ್ರಭಾರ ವಹಿಸಿಕೊಂಡು ಬ್ಯಾಂಕಿನ ಕಾರ್ಯಚಟುವಟಿಕೆಗಳನ್ನು ನಿರ್ವಹಿಸುತ್ತಿದ್ದರು. ಮಾನ್ಯ ಉಚ್ಚ ನ್ಯಾಯಾಲಯದ ನಿರ್ದೇಶನ ಹಾಗೂ ಆರ್.ಬಿ.ಐ. ಸಲಹೆಯ ಪ್ರಕಾರ ನಿವೃತ್ತ ಕೆನರಾ ಬ್ಯಾಂಕ್‌ನ ಪ್ರಧಾನ ವ್ಯವಸ್ಥಾಪಕರು ಹಾಗೂ ಬ್ಯಾಂಕಿಂಗ್ ಕ್ಷೇತ್ರದಲ್ಲಿ ಪರಿಣಿತಿ ಹೊಂದಿರುವ ಶ್ರೀ ಆರ್. ಅಶೋಕನ್‌ರವರನ್ನು ಆಡಳಿತಾಧಿಕಾರಿಯಾಗಿ ನೇಮಿಸಲಾಗಿದೆ. ಅವರು ದಿನಾಂಕ: 10–11–2020ರಂದು ಪ್ರಭಾರ ವಹಿಸಿಕೊಂಡು ಕರ್ತವ್ಯದಲ್ಲಿ ಮುಂದುವರೆದಿರುತ್ತಾರೆ.

ಆಡಳಿತಾಧಿಕಾರಿಯವರಿಗೆ ಸೂಚನೆ ನೀಡಿ ಸಾಲ ವಸೂಲಾತಿಗೆ ಕ್ರಮ ಕೈಗೊಂಡು ಬ್ಯಾಂಕಿನ ಪುನಃಶ್ಚೇತನಕ್ಕೆ ಕಾರ್ಯಕ್ರಮ ರೂಪಿಸಿ ಕಾಲಬದ್ಧವಾಗಿ ಅನುಷ್ಠಾನಗೊಳಿಸಲು ಅವರಿಗೆ ಸೂಚಿಸಲಾಗಿದೆ.

"ಅ) ದಿನಾಂಕ 10-01-2020 ರ ಅಂತ್ಯಕ್ಕೆ ಒಟ್ಟು ರೂ.1567 ಕೋಟಿ ಸಾಲ ಮತ್ತು ಮುಂಗಡಗಳ ಬಾಕಿ ಇದ್ದು, ದಿನಾಂಕ 31-08-2021 ರ ಅಂತ್ಯಕ್ಕೆ ರೂ.182.22 ಕೋಟಿ ಸಾಲ ವಸೂಲಿಯಾಗಿದ್ದು, ರೂ.1405 ಕೋಟಿ (ಬಡ್ಡಿ ಸೇರಿ) ವಸೂಲಾತಿಗೆ ಬಾಕಿ ಇರುತ್ತದೆ.

ಆ) ದಿನಾಂಕ 09-07-2021 ರ ಅಂತ್ಯಕ್ಕೆ 38848 ಗ್ರಾಹಕರಿಗೆ ರೂ.2073.91 ಕೋಟಿ ಹಾಗೂ 994 ಸಾಂಸ್ಥಿಕ ಗ್ರಾಹಕರಿಗೆ ರೂ.375 ಕೋಟಿಗಳ ಠೇವಣಿ ಹಣವನ್ನು ಪಾವತಿಸಬೇಕಾಗಿದೆ.

ಇ) ದಿನಾಂಕ 10-01-2020 ರಿಂದ 31-08-2021 ರವರೆವಿಗೂ 22623 ಗ್ರಾಹಕರಿಗೆ ರೂ.290.80 ಕೋಟಿ ಠೇವಣಾತಿ ಹಣವನ್ನು ಭಾರತೀಯ ರಿಸರ್ವ್ ಬ್ಯಾಂಕಿನ ನಿರ್ದೇಶನದ ರೀತ್ಯಾ ಪಾವತಿಸಲಾಗಿದೆ.

ಬ್ಯಾಂಕಿನಲ್ಲಿ ದುರುಪಯೋಗ ಮತ್ತು ಅವ್ಯವಹಾರಗಳ ಬಗ್ಗೆ ಕೆಳಕಂಡ ಕ್ರಮ ಕೈಗೊಳ್ಳಲಾಗಿದೆ.

1) ಬ್ಯಾಂಕಿನ ಹಗರಣಕ್ಕೆ ಸಂಬಂಧಪಟ್ಟಂತೆ ಸಿಐಡಿ ತನಿಖೆ ನಡೆಯುತ್ತಿದ್ದು, ತನಿಖೆಯ ಹಂತ, ಆರೋಪ ಪಟ್ಟಿ ಸಲ್ಲಿಕೆ ಬಗ್ಗೆ ಮಾಹಿತಿಯನ್ನು ಗೃಹ ಇಲಾಖೆ ನೀಡಬೇಕಾಗಿದೆ.
2) 2014-15 ರಿಂದ 2018-19 ರವರೆಗಿನ ಮರುಲೆಕ್ಕಪರಿಶೋಧನೆಗೆ ಆದೇಶಿಸಲಾಗಿದೆ.
3) ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 ರ ಪ್ರಕರಣ 64 ರ ವಿಚಾರಣೆಗೆ ಆದೇಶಿಸಲಾಗಿದೆ. ವಿಚಾರಣೆ ವರದಿ ನಿರೀಕ್ಷಿಸಲಾಗಿದೆ.
4) ಬ್ಯಾಂಕಿನಲ್ಲಿ ಹಣ ದುರುಪಯೋಗಕ್ಕೆ ಕಾರಣರಾದ ಸಿಬ್ಬಂದಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗಿದೆ. ಪೋಲಿಸ್ ಠಾಣೆಯಲ್ಲಿ ದೂರು ದಾಖಲಿಸಲಾಗಿದೆ.

2019-20 ನೇ ಸಾಲಿನ ಲೆಕ್ಕಪರಿಶೋಧನೆ ಪೂರ್ಣಗೊಂಡಿದ್ದು, ಸದರಿ ವರದಿಯ ಪ್ರಕಾರ ಬ್ಯಾಂಕ್ ರೂ.1923.00 ಕೋಟಿ ನಷ್ಟವನ್ನು ಹೊಂದಿರುತ್ತದೆ.

ಬ್ಯಾಂಕಿನ ಮರು ಲೆಕ್ಕಪರಿಶೋಧನೆ ಪೂರ್ಣಗೊಂಡ ನಂತರ ವಾಸ್ತವಿಕ ಅಂಶಗಳು ಬೆಳಕಿಗೆ ಬರುತ್ತವೆ.

ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಸಲ್ಲಿಕೆಯಾಗಿರುವ ಸಾರ್ವಜನಿಕ ಹಿತಾಸಕ್ತಿ ರಿಟ್ ಅರ್ಜಿ ಸಂಖ್ಯೆ: 7350/2020ರಲ್ಲಿ ಕಾಲಕಾಲಕ್ಕೆ ನೀಡಿರುವ ನಿರ್ದೇಶನಗಳನ್ನು ಪಾಲಿಸಲಾಗುತ್ತಿದೆ.

ಸಹಕಾರ ಸಂಘಗಳ ಜಂಟಿ ನಿಬಂಧಕರು
(ಪಟ್ಟಣ ಬ್ಯಾಂಕುಗಳ ವಿಭಾಗ)